All India Radio: Bangalore
National Bulletin In Kannada
06.05.2026  7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<>><><*><><<>

ಮುಖ್ಯಾಂಶಗಳು

೧. ಮುಂಬರುವ ಸಕ್ಕರೆ ಹಂಗಾಮಿನಲ್ಲಿ ಪ್ರತಿ ಕ್ವಿಂಟಾಲ್ ಕಬ್ಬಿಗೆ ೩೬೫ ರೂಪಾಯಿ ನ್ಯಾಯಯುತ ಮತ್ತು ಲಾಭದಾಯಕ ಬೆಲೆ ನೀಡಲು ಕೇಂದ್ರ ಸಂಪುಟ ಅನುಮೋದನೆ

೨. ಕರ್ನಾಟಕ ಸೇರಿ ಆರು ರಾಜ್ಯಗಳಲ್ಲಿ ಮೂರು ಮಲ್ಟಿ ಟ್ರ್ಯಾಕಿಂಗ್ ಯೋಜನೆಗಳಿಗೆ ಕೇಂದ್ರ ಸರ್ಕಾರ ಒಪ್ಪಿಗೆ

೩. ತಮಿಳುನಾಡು, ಪಶ್ಚಿಮ ಬಂಗಾಳ, ಪುದುಚೆರಿ ಮತ್ತು ಕೇರಳದಲ್ಲಿ ಬಿರುಸುಗೊಂಡ ಸರ್ಕಾರ ರಚನೆ ಪ್ರಕ್ರಿಯೆ

೪. ಕರ್ನಾಟಕದಲ್ಲಿ ಕನಿಷ್ಠ ಬೆಂಬಲ ಬೆಲೆಯಡಿ ೯ ಸಾವಿರ ಮೆಟ್ರಿಕ್ ಟನ್‌ಗೂ ಅಧಿಕ ಸೂರ್ಯಕಾಂತಿ ಖರೀದಿಗೆ ಕೇಂದ್ರ ಸಮ್ಮತಿ

೫. ಐಪಿಎಲ್ ಟಿ-೨೦ ಕ್ರಿಕೆಟ್; ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಚೆನ್ನೈ ಸೂಪರ್ ಕಿಂಗ್ಸ್‌ಗೆ ೮ ವಿಕೆಟ್‌ಗಳ ಗೆಲುವು

<>><><*><><<>

ಭಾರತದ ಹತ್ತಿ ವಲಯದಲ್ಲಿನ ಅಡಚಣೆಗಳು, ಕ್ಷೀಣಿಸುತ್ತಿರುವ ಬೆಳವಣಿಗೆ ಮತ್ತು ಗುಣಮಟ್ಟದ ಆತಂಕಗಳನ್ನು ಪರಿಹರಿಸಲು ೫ ಸಾವಿರದ ೬೦೦ ಕೋಟಿ ರೂಪಾಯಿಗಳಿಗೂ ಅಧಿಕಮೊತ್ತದ ಹತ್ತಿ ಉತ್ಪಾದನೆಗಾಗಿ ಮಿಷನ್ ಫಾರ್ ಕಪಾಸ್ ಕಾಂತಿಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ. ನವದೆಹಲಿಯಲ್ಲಿ ನಿನ್ನೆ ಮಾಧ್ಯಮಗಳೊಂದಿಗೆ ಮಾತನಾಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಈ ಮಿಷನ್ ಸರ್ಕಾರದ ೫ಎಫ್ ವಿಷನ್, ಫಾರ್ಮ್ ಟು ಫೈಬರ್ ಟು ಫ್ಯಾಕ್ಟರಿ ಟು ಫ್ಯಾಶನ್ ಟು ಫಾರಿನ್ ಗೆ ಹೊಂದಿಕೆಯಾಗುತ್ತದೆ ಮತ್ತು ಹತ್ತಿ ಉತ್ಪಾದನೆ ಗಣನೀಯವಾಗಿ ಹೆಚ್ಚಳಕ್ಕೆ ಗಮನಹರಿಸುತ್ತದೆ ಎಂದು ಹೇಳಿದರು. ಈ ಯೋಜನೆಯು ರೋಗಗಳು ಮತ್ತು ಕೀಟಗಳಿಗೆ ನಿರೋಧಕವಾದ ಹೆಚ್ಚಿನ ಇಳುವರಿ ನೀಡುವ ವಿಧದ ಬೀಜಗಳನ್ನು ಅಭಿವೃದ್ಧಿಪಡಿಸುವ ಗುರಿ ಹೊಂದಿದೆ, ಜೊತೆಗೆ ಆಧುನಿಕ ಬೆಳೆ ಉತ್ಪಾದನಾ ತಂತ್ರಜ್ಞಾನಗಳ

ದೊಡ್ಡ ಪ್ರಮಾಣದ ಅಳವಡಿಕೆ ಉತ್ತೇಜಿಸುತ್ತದೆ. ಈ ಯೋಜನೆಯು ಸುಮಾರು ೩೨ ಲಕ್ಷ ಹತ್ತಿ ಬೆಳೆಯುವ ರೈತರಿಗೆ ಪ್ರಯೋಜನ ನೀಡುತ್ತದೆ ಮತ್ತು ೨೦೩೦-೩೧ ರ ವೇಳೆಗೆ ಹತ್ತಿ ಉತ್ಪಾದನೆಯನ್ನು ೪೯೮ ಲಕ್ಷ ಬೇಲ್‌ಗಳಿಗೆ ಹೆಚ್ಚಿಸುತ್ತದೆ ಎಂದು ನಿರೀಕ್ಷಿಸಲಾಗಿದೆ. ಅಲ್ಲದೆ, ಕೇಂದ್ರ ಸಚಿವ ಸಂಪುಟವು ತುರ್ತು ಕ್ರೆಡಿಟ್ ಲೈನ್ ಗ್ಯಾರಂಟಿ ಸ್ಕೀಮ್ ೫.೦ ಅನ್ನು ಸಹ ಅನುಮೋದಿಸಿದೆ. ಪಶ್ಚಿಮ ಏಷ್ಯಾ ಬಿಕ್ಕಟ್ಟಿನಿಂದ ಉಂಟಾಗಿರುವ ಅಸಮತೋಲನಗಳನ್ನು ನಿರ್ವಹಿಸಲು ವ್ಯವಹಾರಗಳಿಗೆ ಸಹಾಯ ಮಾಡಲಿದೆ ಎಂದು ತಿಳಿಸಿದರು. ಈ ಯೋಜನೆಯಡಿಯಲ್ಲಿ ಎಂಎಸ್ ಎಂಇಗಳಿಗೆ ಶೇಕಡಾ ೧೦೦ ರಷ್ಟು ಸಾಲ ಖಾತ್ರಿ ನೀಡಲಾಗುವುದು, ಆದರೆ ಎಂಎಸ್‌ಎಂಇ ಹೊರತುಪಡಿಸಿ ಮತ್ತು ವಿಮಾನಯಾನ ವಲಯಕ್ಕೆ ಶೇಕಡಾ ೯೦ರಷ್ಟು ಗ್ಯಾರಂಟಿಯನ್ನು ವಿಸ್ತರಿಸಲಾಗುವುದು. ಅರ್ಹ ಸಾಲಗಾರರಿಗೆ ವಿಸ್ತರಿಸಲಾದ ಹೆಚ್ಚುವರಿ ಸಾಲ ಸೌಲಭ್ಯದ ಅಡಿಯಲ್ಲಿ ಡೀಫಾಲ್ಟ್ ಆಗಿರುವ ಮೊತ್ತಕ್ಕೆ ನ್ಯಾಷನಲ್ ಕ್ರೆಡಿಟ್ ಗ್ಯಾರಂಟಿ ಟ್ರಸ್ಟಿ ಕಂಪನಿ ಲಿಮಿಟೆಡ್ ಸದಸ್ಯ ಸಾಲ ನೀಡುವ ಸಂಸ್ಥೆಗಳಿಗೆ ಗ್ಯಾರಂಟಿ ವ್ಯಾಪ್ತಿಯನ್ನು ನೀಡುತ್ತದೆ. ಜತೆಗೆ ಕೇಂದ್ರ ಸಚಿವ ಸಂಪುಟ, ೨೦೨೬-೨೭ರ ಸಕ್ಕರೆ ಹಂಗಾಮಿನಲ್ಲಿ ಕಬ್ಬಿಗೆ ಕ್ವಿಂಟಲ್‌ಗೆ ೩೬೫ ರೂಪಾಯಿಗಳ ನ್ಯಾಯಯುತ ಮತ್ತು ಲಾಭದಾಯಕ ಬೆಲೆಯನ್ನು ಅನುಮೋದಿಸಿದೆ, ಇದು ಶೇಕಡಾ ೧೦.೨೫ರಷ್ಟು ಮೂಲ ರಿಕವರಿ ದರವನ್ನು ಆಧರಿಸಿದೆ. ಈ ನಿರ್ಧಾರವು ಸುಮಾರು ೫ ಕೋಟಿ ಕಬ್ಬು ರೈತರಿಗೆ, ಸಕ್ಕರೆ ಗಿರಣಿಗಳಲ್ಲಿ ಮತ್ತು ಸಂಬಂಧಿತ ಪೂರಕ ಚಟುವಟಿಕೆಗಳಲ್ಲಿ ಕೆಲಸ ಮಾಡುವ ಸುಮಾರು ೫ ಲಕ್ಷ ಕಾರ್ಮಿಕರಿಗೆ ಪ್ರಯೋಜನ ನೀಡುತ್ತದೆ ಎಂದು ವೈಷ್ಣವ್ ಹೇಳಿದರು. ಭಾರತ ಸೆಮಿಕಂಡಕ್ಟರ್ ಮಿಷನ್ ಅಡಿಯಲ್ಲಿ ಇನ್ನೂ ಎರಡು ಸೆಮಿಕಂಡಕ್ಟರ್ ಯೋಜನೆಗಳನ್ನು ಕೇಂದ್ರ ಸಚಿವ ಸಂಪುಟ ಅನುಮೋದಿಸಿದೆ. ಅವುಗಳಲ್ಲಿ ಗ್ಯಾಲಿಯಮ್ ನೈಟ್ರೈಡ್ ತಂತ್ರಜ್ಞಾನವನ್ನು ಆಧರಿಸಿದ ದೇಶದ ಮೊದಲ ವಾಣಿಜ್ಯ ಮಿನಿ/ಮೈಕ್ರೋ-ಎಲ್‌ಇಡಿ ಪ್ರದರ್ಶನ ಸೌಲಭ್ಯ ಮತ್ತು ಸೆಮಿಕಂಡಕ್ಟರ್ ಪ್ಯಾಕೇಜಿಂಗ್ ಸೌಲಭ್ಯ ಸೇರಿವೆ ಎಂದು ವೈಷ್ಣವ್ ಹೇಳಿದರು.

<>><><*><><<>

ಕರ್ನಾಟಕ, ಮಧ್ಯಪ್ರದೇಶ, ರಾಜಸ್ಥಾನ, ಉತ್ತರಪ್ರದೇಶ, ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳ ೧೯ ಜಿಲ್ಲೆಗಳನ್ನೊಳಗೊಂಡ ಮೂರು ಮಲ್ಟಿ ಟ್ರ್ಯಾಕಿಂಗ್ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಆರ್ಥಿಕ ವ್ಯವಹಾರಗಳ ಕುರಿತಾದ ಸಂಪುಟ ಸಮಿತಿ ಅನುಮೋದನೆ ನೀಡಿದೆ. ಈ ಯೋಜನೆಗಳ ಒಟ್ಟು ಅಂದಾಜು ವೆಚ್ಚ ೧೨ ಸಾವಿರದ ೪೩೭ ಕೋಟಿ ರೂಪಾಯಿಗಳಾಗಿದ್ದು, ಇದರಿಂದ ಹಾಲಿ ಇರುವ ರೈಲ್ವೆ ಜಾಲಕ್ಕೆ ಹೊಸದಾಗಿ ೯೦೧ ಕಿಲೋಮೀಟರ್ ಸೇರ್ಪಡೆಯಾಗಲಿದೆ. ಈ ಕಾಮಗಾರಿ ೨೦೩೦-೩೧ರ ವೇಳೆಗೆ

ಪೂರ್ಣಗೊಳ್ಳುತ್ತದೆ ಎಂದು ನಿರೀಕ್ಷಿಸಲಾಗಿದೆ. ಇದರಿಂದ ಸರಕು ಸಾಗಾಣೆ ಹಾಗೂ ಪ್ರಯಾಣಿಕರ ಸಂಚಾರಕ್ಕೆ ಅನುಕೂಲವಾಗಿದೆ.

<>><><*><><<>

ಪಶ್ಚಿಮ ಬಂಗಾಳ, ತಮಿಳುನಾಡು, ಪುದುಚೇರಿ ಮತ್ತು ಕೇರಳದಲ್ಲಿ ವಿಧಾನಸಭಾ ಚುನಾವಣಾ ಫಲಿತಾಂಶ ಘೋಷಣೆಯಾದ ನಂತರ ಸರ್ಕಾರ ರಚನೆಗೆ ರಾಜಕೀಯ ಚಟುವಟಿಕೆಗಳು ಬಿರುಸುಗೊಂಡಿವೆ.  ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಭರ್ಜರಿ ಜಯಗಳಿಸಿದ ನಂತರ, ರಾಜ್ಯದಲ್ಲಿ ಹೊಸ ಸರ್ಕಾರ ರಚನೆ ಮತ್ತು ಪ್ರಮಾಣವಚನ ಸ್ವೀಕಾರ ಸಮಾರಂಭಕ್ಕೆ ಸಿದ್ಧತೆಗಳು ಭರದಿಂದ ಸಾಗಿವೆ. ಗುರುದೇವ್ ರವೀಂದ್ರನಾಥ ಟ್ಯಾಗೋರ್ ಜನ್ಮ ದಿನವಾದ ಇದೇ ೯ ರಂದು ಹೊಸ ಸಚಿವ ಸಂಪುಟ ಸದಸ್ಯರು ಪ್ರಮಾಣ ವಚನ ಸ್ವೀಕರಿಸುವ ಸಾಧ್ಯತೆಯಿದೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಸಮಾರಂಭದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ತಮಿಳುನಾಡಿನಲ್ಲಿ ನಟ-ರಾಜಕಾರಣಿ ಸಿ. ಜೋಸೆಫ್ ವಿಜಯ್ ಅವರ ತಮಿಳಗ ವೆಟ್ರಿ ಕಳಗಂ-ಟಿವಿಕೆ ೧೦೮ ಸ್ಥಾನಗಳನ್ನು ಗೆದ್ದು ರಾಜ್ಯದಲ್ಲಿ ಏಕೈಕ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. ಹೊಸದಾಗಿ ಆಯ್ಕೆಯಾದ ಟಿವಿಕೆ ಶಾಸಕರು ಚೆನ್ನೈ ಬಳಿಯ ಪನೈಯೂರ್‌ನಲ್ಲಿರುವ ಪಕ್ಷದ ಪ್ರಧಾನ ಕಚೇರಿಯಲ್ಲಿ ನಡೆದ ಶಾಸಕಾಂಗ ಪಕ್ಷದ ಸಭೆಯಲ್ಲಿ ವಿಜಯ್ ಅವರನ್ನು ತಮ್ಮ ನಾಯಕನನ್ನಾಗಿ ಅಧಿಕೃತವಾಗಿ ಆಯ್ಕೆ ಮಾಡಿದ್ದಾರೆ. ಈ ಮಧ್ಯೆ, ನಿರ್ಗಮಿತ ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ರಾಜ್ಯಪಾಲರಿಗೆ ತಮ್ಮ ರಾಜೀನಾಮೆ ಸಲ್ಲಿಸಿದ್ದು,ಅವರು ಅದನ್ನು ಅಂಗೀಕರಿಸಿದ್ದಾರೆ.  ಪುದುಚೇರಿ ವಿಧಾನಸಭಾ ಚುನಾವಣೆಯಲ್ಲಿ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ ಎನ್‌ಡಿಎ ಹೊಸ ಸರ್ಕಾರ ರಚನೆಯ ಕುರಿತು ಬಿರುಸಿನ ಸಮಾಲೋಚನೆ ಆರಂಭಿಸಿದೆ. ಕೇರಳದಲ್ಲಿ, ಕಾಂಗ್ರೆಸ್ ನೇತೃತ್ವದ ಯುಡಿಎಫ್ ಸರ್ಕಾರ ರಚನೆಗಾಗಿ ಚರ್ಚೆ ಮುಂದುವರೆಸಿದೆ.

<>><><*><><<>

ಭಬಾನಿಪುರ ವಿಧಾನಸಭಾ ಕ್ಷೇತ್ರದ ಮತ ಎಣಿಕೆ ಸಂಬಂಧ ತೃಣಮೂಲ ಕಾಂಗ್ರೆಸ್ ಅಭ್ಯರ್ಥಿ ಮತ್ತು ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಮಾಡಿರುವ ಆರೋಪಗಳನ್ನು ಆಧಾರರಹಿತ ಮತ್ತು ಸುಳ್ಳು ಎಂದು ಕೇಂದ್ರ ಚುನಾವಣಾ ಆಯೋಗ ಸ್ಪಷ್ಟವಾಗಿ ತಳ್ಳಿಹಾಕಿದೆ.  ದಕ್ಷಿಣ ಕೋಲ್ಕತ್ತಾದ ಜಿಲ್ಲಾ ಚುನಾವಣಾಧಿಕಾರಿ ಬಿಡುಗಡೆ ಮಾಡಿರುವ ಹೇಳಿಕೆಯಲ್ಲಿ, ಸಂಪೂರ್ಣ ಎಣಿಕೆ ಪ್ರಕ್ರಿಯೆ ಆಯೋಗದ ನಿಯಮಗಳಿಗೆ ಅನುಸಾರವಾಗಿ ನಡೆಸಲಾಗಿದೆ ಎಂದು ಸ್ಪಷ್ಟಪಡಿಸಲಾಗಿದೆ. ಇಡೀ ಪ್ರಕ್ರಿಯೆಯು ಮುಕ್ತ, ನ್ಯಾಯಯುತ ಮತ್ತು ಪಾರದರ್ಶಕವಾಗಿತ್ತು, ಪ್ರತಿಯೊಂದು ಹಂತವನ್ನು ಕಾನೂನಿನ ಕಟ್ಟುನಿಟ್ಟಿನ ಅನುಸರಣೆಯ ಅಡಿಯಲ್ಲಿ ನಡೆಸಲಾಗಿದೆ. ಎಣಿಕೆಯ ಸಮಯದಲ್ಲಿ

ಸಿಸಿಟಿವಿ ಕ್ಯಾಮೆರಾಗಳನ್ನು ಆಫ್ ಮಾಡಲಾಗಿದೆ ಎಂಬ ಆರೋಪ ಸ್ಪಷ್ಟವಾಗಿ ನಿರಾಕರಿಸಲಾಗಿದ್ದು, ಕ್ಯಾಮೆರಾಗಳು ಉದ್ದಕ್ಕೂ ಕಾರ್ಯನಿರ್ವಹಿಸುತ್ತಿದ್ದವು ಎಂದು ಅಧಿಕಾರಿಗಳು ದೃಢಪಡಿಸಿದ್ದಾರೆ.

<>><><*><><<>

ರೈತರ ಹಿತಾಸಕ್ತಿ ಕಾಯಲು ಕೇಂದ್ರ ಸರ್ಕಾರವು ನಿರ್ಣಾಯಕ ಹೆಜ್ಜೆ ಇಟ್ಟಿದ್ದು, ರೈತರಿಗೆ ೪ ಸಾವಿರದ ೮೦೦ ಕೋಟಿ ರೂಪಾಯಿಗಳಿಗೂ ಅಧಿಕ ಕನಿಷ್ಠ ಬೆಂಬಲ ಬೆಲೆ -ಎಂಎಸ್‌ಪಿ ನೆರವನ್ನು ನೀಡಿದೆ. ಈ ವರ್ಷದ ಹಿಂಗಾರು ಬೆಳೆ ಋತುವಿನಲ್ಲಿ ಕರ್ನಾಟಕದಲ್ಲಿ ಎಂಎಸ್‌ಪಿಯಡಿ ೯ ಸಾವಿರ ಮೆಟ್ರಿಕ್ ಟನ್‌ಗಳಿಗೂ ಅಧಿಕ ಸೂರ್ಯಕಾಂತಿ ಖರೀದಿಗೆ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅನುಮೋದನೆ ನೀಡಿದ್ದಾರೆ. ಈ ಅನುಮೋದನೆಯ ಒಟ್ಟು ಎಂಎಸ್ ಪಿ ಮೌಲ್ಯವು ೭೯ ಕೋಟಿ ರೂಪಾಯಿಗಳಿಗಿಂತ ಅಧಿಕ ಎಂದು ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯ ತಿಳಿಸಿದೆ. ಕರ್ನಾಟಕದ ಸೂರ್ಯಕಾಂತಿ ರೈತರು ತಮ್ಮ ಉತ್ಪನ್ನಗಳಿಗೆ ನ್ಯಾಯಯುತ ಮತ್ತು ಲಾಭದಾಯಕ ಬೆಲೆ ಪಡೆಯುವುದು ಖಾತ್ರಿಯಾಗಿದೆ. ೨೦೨೫-೨೬ ರ ಹಿಂಗಾರು ಋತುವಿನಲ್ಲಿ ಮಹಾರಾಷ್ಟ್ರದಲ್ಲಿ ಬೇಳೆಯ ಗರಿಷ್ಠ ಖರೀದಿ ಮಿತಿಯನ್ನು ಸರ್ಕಾರ ೮ ಲಕ್ಷ ಮೆಟ್ರಿಕ್ ಟನ್‌ಗಳಿಗೆ ಹೆಚ್ಚಿಸಿದೆ.ಸರ್ಕಾರವು ಮಹಾರಾಷ್ಟ್ರದಲ್ಲಿ ಬೇಳೆಯ ಖರೀದಿ ಅವಧಿಯನ್ನು ೩೦ ದಿನಗಳವರೆಗೆ ವಿಸ್ತರಿಸಿದೆ, ಮೇ ೨೯ ರವರೆಗೆ ಖರೀದಿಗಳನ್ನು ಮುಂದುವರಿಸಲು ಅವಕಾಶ ನೀಡಿದೆ. ಬೆಲೆ ಖಾತರಿಯನ್ನು ಖಚಿತಪಡಿಸಿಕೊಳ್ಳುವುದು ಮತ್ತು ಮಾರುಕಟ್ಟೆಯ ಏರಿಳಿತ ತಗ್ಗಿಸುವ ಮೂಲಕ ಕೃಷಿ ಆರ್ಥಿಕತೆಯನ್ನು ಬಲಪಡಿಸುವ ಗುರಿಯನ್ನು ಈ ಕ್ರಮಗಳು ಹೊಂದಿವೆ ಎಂದು ಸಚಿವಾಲಯ ತಿಳಿಸಿದೆ. ರೈತರಿಗೆ ಲಾಭದಾಯಕ ಬೆಲೆಗಳನ್ನು ಖಚಿತಪಡಿಸುವುದು ಪ್ರಮುಖ ಆದ್ಯತೆಯಾಗಿ ಉಳಿದಿದೆ ಎಂದು ಸರ್ಕಾರ ಹೇಳಿದೆ.

<>><><*><><<>

ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳ ಸಂಖ್ಯೆ ಹೆಚ್ಚಳ ತಿದ್ದುಪಡಿ ಮಸೂದೆ, ೨೦೨೬ ಅನ್ನು ಸಂಸತ್ತಿನಲ್ಲಿ ಮಂಡಿಸುವ ಪ್ರಸ್ತಾಪವನ್ನು ಕೇಂದ್ರ ಸಚಿವ ಸಂಪುಟ ಅನುಮೋದಿಸಿದೆ. ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳ ಸಂಖ್ಯೆ ಕಾಯ್ದೆ, ೧೯೫೬ ಅನ್ನು ತಿದ್ದುಪಡಿ ಮಾಡುವ ಮೂಲಕ ಸುಪ್ರೀಂಕೋರ್ಟ್‌ನಲ್ಲಿ ಅನುಮೋದಿತ ನ್ಯಾಯಮೂರ್ತಿಗಳ ಸಂಖ್ಯೆಯನ್ನು ಪ್ರಸ್ತುತ ಇರುವ ೩೩ ರಿಂದ ೩೭ ಕ್ಕೆ ಹೆಚ್ಚಿಸಲಾಗುವುದು ಎಂದರು.

<>><><*><><<>

ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಚೆನ್ನೈ ಸೂಪರ್ ಕಿಂಗ್ಸ್ ೮ ವಿಕೆಟ್ ಗಳ ಗೆಲುವು ಸಾಧಿಸಿದೆ. ಮೊದಲು ಬ್ಯಾಟ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್ ನಿಗದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೫೫ ರನ್ ಗಳಿಸಿತ್ತು. ಗೆಲುವಿನ ಗುರಿ ಬೆನ್ನತ್ತಿದ ಚೆನ್ನೈ ಸೂಪರ್ ಕಿಂಗ್ಸ್ ಇನ್ನೂ ೧೫ ಎಸೆತ ಬಾಕಿ ಇರುವಂತೆಯೇ ಕೇವಲ ೨ ವಿಕೆಟ್ ನಷ್ಟಕ್ಕೆ ೧೫೯ ರನ್ ಗಳಿಸಿ, ಗೆಲುವು ಸಾಧಿಸಿತು.

ಹೈದರಾಬಾದ್‌ನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೬.೩೦ ಆರಂಭವಾಗಲಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>